# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ಚೌಕ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** ದಿನಾಂಕ: 24.07.2020

**ಪೂಜ್ಯ ಮಹಾಪೌರರು ರವರಿಂದ ಅಶ್ವಾರೂಢ ಬಸವಣ್ಣನವರ ಪ್ರತಿಮೆ, ಪಶ್ಚಿಮ ಹಾಗೂ ಯಲಹಂಕ ವಲಯದ ಕೋವಿಡ್ ಕಮಾಂಡ್ ಸೆಂಟರ್ ತಪಾಸಣೆ ನಡೆಸಿರುವ ಬಗ್ಗೆ:**

ನಗರದ ಚಾಲುಕ್ಯ ವೃತ್ತದಲ್ಲಿರುವ ಅಶ್ವಾರೂಢ ಬಸವಣ್ಣನವರ ಪ್ರತಿಮೆಯ ಸುತ್ತಲು ಅನುಭವ ಮಂಟಪ ಪರಿಕಲ್ಪನೆಯಡಿ ಮರುವಿನ್ಯಾಸಗೊಳಿಸುವ ಪ್ರಗತಿ ಕಾಮಗಾರಿಯನ್ನು ಇಂದು ಪೂಜ್ಯ ಮಹಾಪೌರರು ರವರು ತಪಾಸಣೆ ನಡೆಸಿದರು.

ಬಸವಣ್ಣನವರ ತತ್ವ ಸಿದ್ದಾಂತಗಳನ್ನು ಈಗಿನ ಪೀಳಿಗೆಗೆ ಪರಿಚಯಿಸುವ ನಿಟ್ಟಿನಲ್ಲಿ, ಚಾಲುಕ್ಯ ವೃತ್ತದಲ್ಲಿರುವ ಅಶ್ವಾರೂಢ ಬಸವಣ್ಣನವರ ಪ್ರತಿಮೆಯ ಸುತ್ತಲು 12ನೇ ಶತಮಾನದ ವಚನ ಸಾಹಿತ್ಯ, ಪ್ರತಿಮೆ ಹಿಂಭಾಗದಲ್ಲಿ ಅರ್ಧ ಚಂದ್ರಾಕೃತಿಯ ಬೃಹತ್ ಗೋಡೆ ನಿರ್ಮಾಣ, ಅಲಂಕಾರಿಕ ವಿದ್ಯುತ್ ದೀಪಗಳು, ಶಿಲಾಸ್ಥಂಭಗಳನ್ನು ಅಳವಡಿಸುವ ಕಾರ್ಯ ಪ್ರಗತಿಯಲ್ಲಿದೆ. ಪ್ರತಿಮೆ ಸುತ್ತ ಅಂತಿಮ ಸ್ಪರ್ಶ ನೀಡಲಾಗುತ್ತಿದ್ದು, ಅತಿ ಶೀಘ್ರ ದಿನಾಂಕ ನಿಗದಿ ಪಡಿ ಉದ್ಘಾಟನೆ ಮಾಡಲಾಗುತ್ತದೆ.

**ಪಶ್ಚಿಮ ವಲಯದ ಕೋವಿಡ್-19 ಕಮಾಂಡ್ ಸೆಂಟರ್‌ಗೆ ಭೇಟಿ:**

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಪಶ್ಚಿಮ ವಲಯ ವ್ಯಾಪ್ತಿಯಲ್ಲಿ ಸ್ಥಾಪಿಸಿರುವ ಕೋವಿಡ್-19 ಕಮಾಂಡ್ ಸೆಂಟರ್ ಗೆ ಇಂದು ಪೂಜ್ಯ ಮಹಾಪೌರರು ರವರು ಭೇಟಿ ನೀಡಿ ಅಲ್ಲಿನ ವ್ಯವಸ್ಥೆಯ ಕುರಿತು ಪರಿಶೀಲನೆ ನಡೆಸಿದರು. ಈ ವೇಳೆ ವಲಯ ಜಂಟಿ ಆಯುಕ್ತರು ಶ್ರೀ ಚಿದಾನಂದ, ಆರೋಗ್ಯಾಧಿಕಾರಿ ಡಾ. ಮನೋರಂಜನ್ ಹೆಗ್ಡೆ ಹಾಗೂ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

ಪಶ್ಚಿಮ ವಲಯ ವ್ಯಾಪ್ತಿಗೆ ಸಂಬಂಧಿಸಿದಂತೆ ಕೋವಿಡ್-19 ಕಮಾಂಡ್ ಸೆಂಟರ್ ಕಾರ್ಯ ನಿರ್ವಹಣೆ ಕುರಿತು ಪರಿಶೀಲನೆ ನಡೆಸಿದ ಮಹಾಪೌರರು, ಹೋಮ್ ಐಸೊಲೇಶನ್, ಪ್ರಥಮ ಸೋಂಕಿತರು ಹಾಗೂ ದ್ವಿತೀಯ ಸೋಂಕಿತರನ್ನು ಟ್ರೇಸ್ ಮಾಡಬೇಕು. ಮಿಸ್ಸಿಂಗ್ ಹಾಗುವವರ ಬಗ್ಗೆ ಪಟ್ಟಿ ಮಾಡಿ ಸ್ಥಳೀಯ ಪೊಲೀಸರಿಗೆ ಮಾಹಿತಿ ನೀಡಿ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಜಂಟಿ ಆಯುಕ್ತರಿಗೆ ಸೂಚನೆ ನೀಡಿದರು. ಕೋವಿಡ್ ಸೋಂಕಿತರನ್ನು ಆಸ್ಪತ್ರೆ/ಕೋವಿಡ್ ಅರೈಕೆ ಕೇಂದ್ರಗಳಿಗೆ ಕರೆದೊಯ್ಯಲು ಆಂಬ್ಯುಲ್ಸ್ ಗಳ ಕೊರತೆಯಾಗದಂತೆ ನೋಡಿಕೊಳ್ಳಬೇಕು ಎಂದು ಸೂಚನೆ ನೀಡಿದರು.

**ಯಲಹಂಕ ವಲಯದ ಕೋವಿಡ್-19 ಕಮಾಂಡ್ ಸೆಂಟರ್‌ಗೆ ಭೇಟಿ:**

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಯಲಹಂಕ ವಲಯ ವ್ಯಾಪ್ತಿಯಲ್ಲಿ ಸ್ಥಾಪಿಸಿರುವ ಕೋವಿಡ್-19 ಕಮಾಂಡ್ ಸೆಂಟರ್ ಗೆ ಇಂದು ಪೂಜ್ಯ ಮಹಾಪೌರರು ರವರು ಭೇಟಿ ನೀಡಿ ಅಲ್ಲಿನ ವ್ಯವಸ್ಥೆಯ ಕುರಿತು ಪರಿಶೀಲನೆ ನಡೆಸಿದರು. ಈ ವೇಳೆ ವಲಯ ಜಂಟಿ ಆಯುಕ್ತರು ಶ್ರೀ ಅಶೋಕ್, ಆರೋಗ್ಯಾಧಿಕಾರಿ ಡಾ. ಸವಿತಾ ಹಾಗೂ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

ಯಲಹಂಕ ವಲಯ ವ್ಯಾಪ್ತಿಗೆ ಸಂಬಂಧಿಸಿದಂತೆ ಕೋವಿಡ್-19 ಕಮಾಂಡ್ ಸೆಂಟರ್ ಕಾರ್ಯ ನಿರ್ವಹಣೆ ಕುರಿತು ಪರಿಶೀಲನೆ ನಡೆಸಿದ ಮಹಾಪೌರರು, ಸದರಿ ವಲಯದಲ್ಲಿ ಕೋವಿಡ್ ಪ್ರಕರಗಳಿರುವ ಬಗ್ಗೆ, ಹೋಮ್ ಐಸೊಲೇಶನ್, ಪ್ರಥಮ ಸೋಂಕಿತರು ಹಾಗೂ ದ್ವಿತೀಯ ಸೋಂಕಿತರನ್ನು ಟ್ರೇಸ್ ಮಾಡುವ ಬಗ್ಗೆ ಮಾಹಿತಿ ಪಡೆದುಕೊಂಡರು. ಜೊತೆಗೆ ಸಿಬ್ಬಂದಿ ಕಾರ್ಯನಿರ್ವಹಣೆಯನ್ನು ಪರಿಶೀಲಿಸಿದರು.

ಮುಂದಿನ ದಿನಗಳಲ್ಲಿ ಕೋವಿಡ್ ಸೋಂಕು ಪ್ರಕರಣಗಳು ಹೆಚ್ಚಾಗದಂತೆ ಸೂಕ್ತ ಕ್ರಮ ವಹಿಸಬೇಕು. ಮುಂದಿನ ಮೂರು ತಿಂಗಳುಗಳ ಕಾಲ ಮಾಡಿಕೊಳ್ಳಬೇಕಿರುವ ಅವಶ್ಯಕ ಸಿದ್ಧತೆಗಳ ಬಗ್ಗೆ ಕ್ರಮ ವಹಿಸಬೇಕು. ಸೋಂಕಿತರನ್ನು ಆಸ್ಪತ್ರೆಗೆ ಕರೆದೊಯ್ಯಲು ಆಂಬ್ಯುಲೆನ್ಸ್ ಗಳ ಕೊರತೆ ಆಗದಂತೆ ನೋಡಿಕೊಳ್ಳಬೇಕು ಎಂದು ಜಂಟಿ ಆಯುಕ್ತರು ರವರಿಗೆ ಸೂಚನೆ ನೀಡಿದರು.

**ಈ ಮೇಲ್ಕಂಡ ವಿಷಯವನ್ನು ತಮ್ಮ ಮಾಧ್ಯಮದಲ್ಲಿ ಪ್ರಚುರಪಡಿಸಲು ಕೋರಿದೆ.**

**ಸಾರ್ವಜನಿಕ ಸಂಪರ್ಕಾಧಿಕಾರಿ**